**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂ: DTE-ADMI0SCH2/3/2023

ಆಯುಕ್ತರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು-560 001.
ದಿನಾಂಕ: 20-10-2023.

**-:: ಸುತ್ತೋಲೆ ::-**

**ವಿಷಯ :** **2023-24ನೇ** ಸಾಲಿಗೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳು ಪ್ರಿಮೆಟ್ರಿಕ್-ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ :**
1. ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಶಾಖೆಯ ಇ-ಮೇಲ್ ದಿನಾಂಕ: 04-11-2022.
2. ಸರ್ಕಾರಿ ಆದೇಶ ಸಂಖ್ಯೆ: ಇಡಿ/218/ಟಿಪಿಇ/99, ದಿನಾಂಕ: 27/01/2001 ಮತ್ತು ಸಂಖ್ಯೆ: ಇಡಿ 128 ಹೆಚ್‌ಪಿಟಿ 2022, ದಿ: 28-02-2023

**-0000000-**

ತಾಂತ್ರಿಕ ಶಿಕ್ಷಣ ಇಲಾಖೆಯ ಒಳಪಡುವ 06 ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಯ 08ನೇ, 09ನೇ ಮತ್ತು 10ನೇ ತರಗತಿಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿಗಳ ಪ್ರಗತಿ, ನಡತೆ ಮತ್ತು ತರಗತಿ ಹಾಜರಾತಿ ತೃಪ್ತಿಕರವಾಗಿರುವ ಷರತ್ತಿಗೆ ಒಳಪಟ್ಟಂತೆ, ಉಲ್ಲೇಖ(2)ರ ಸರ್ಕಾರಿ ಆದೇಶದಂತೆ ಶಿಷ್ಯವೇತನ (ಸ್ಟೈಫಂಡ್) ಅನ್ನು ಮಂಜೂರು ಮಾಡಲಾಗುತ್ತಿದೆ. ಅದರಂತೆ **2023-24ನೇ** ಸಾಲಿಗೆ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಯಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಅಧಾರ್ ಸಂಖ್ಯೆಯನ್ನು ಜೋಡಣೆ ಮಾಡಿಸಿರುವ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಎಸ್.ಎಸ್.ಪಿ/ಡಿ.ಬಿ.ಟಿ ಮುಖಾಂತರ ಶಿಷ್ಯವೇತನವನ್ನು ನೀಡಬೇಕಾಗಿರುವುದರಿಂದ, ಕಡ್ಡಾಯವಾಗಿ ಎಲ್ಲಾ ವರ್ಗದ ವಿದ್ಯಾರ್ಥಿಗಳು **ಪ್ರಿಮೆಟ್ರಿಕ್- ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ(Prematic-State Scholarship Portal)ದ ಲಿಂಕ್** https://ssp.karnataka.gov.in/ ರಲ್ಲಿ ನೋಂದಣಿ ಮಾಡಿಸಿಕೊಂಡು, ವಿವಿಧ ಯೋಜನೆಯ ವಿದ್ಯಾರ್ಥಿವೇತನಕ್ಕೆ ಸಂಪೂರ್ಣವಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ. ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿಗಳನ್ನು ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಮಾತ್ರ ಇಲಾಖಾವತಿಯಿಂದ ನೀಡುವ ಶಿಷ್ಯವೇತನಕೂ ಸಹ ಅರ್ಹ ಇರುತ್ತಾರೆ ಎಂದು ಈ ಮೂಲಕ ತಿಳಿಸಿದೆ.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,**
**ಬೆಂಗಳೂರು**

**ಇವರಿಗೆ**

**ಪ್ರಾಂಶುಪಾಲರು**, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆ, ಹುಬ್ಬಳ್ಳಿ, ಭದ್ರಾವತಿ, ಬಳ್ಳಾರಿ, ಬಾಗಲಕೋಟೆ, ಕಲಬುರಗಿ ಮತ್ತು ಮಂಗಳೂರು - ಇವರ ಮುಂದಿನ ಸೂಕ್ತ ಕ್ರಮಕ್ಕಾಗಿ.

**ಪ್ರತಿ,**

**ಇ-ಆಡಳಿತ ವಿಭಾಗಕ್ಕೆ** - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.